ಕರ್ನಾಟಕ ಸರ್ಕಾರ

ಸಂಖ್ಯೆ:ಸಿಆಸುಇ 94 ಇಸಪ 2007

ಕರ್ನಾಟಕ ಸರ್ಕಾರದ ಸಚಿವಾಲಯ,
2ನೇ ಮಹಡಿ, 5ನೇ ಹಂತ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 15.07.2008.

ಅಧಿಕೃತ ಜ್ಞಾಪನ

ವಿಷಯ:– ಹಲವು ಜಿಲ್ಲೆಗಳಿಗೆ ಉಸ್ತುವಾರಿ ಕಾರ್ಯದರ್ಶಿಗಳನ್ನಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳನ್ನು ಮತ್ತು ಕಾರ್ಯದರ್ಶಿ ಮಟ್ಟದ ಅಧಿಕಾರಿಗಳನ್ನು ಮರು ನೇಮಕ ಮಾಡುವ ಬಗ್ಗೆ ಮತ್ತು ತಮ್ಮ ಪ್ರವಾಸ ವರದಿಯನ್ನು ಸಮೀಕ್ಷಿಸುವ ಕುರಿತು ಸೂಚನೆಗಳು.

****

ರಾಜ್ಯದ ಅಭಿವೃದ್ಧಿ ಹಾಗೂ ಯೋಜನಾ ಕಾರ್ಯಕ್ರಮಗಳ ವ್ಯಾಪಕ ವಿಮರ್ಶೆ ಮಾಡಲು ಹಾಗೂ ದೂರುಗಳ ವಿಚಾರಣೆ ಸೇರಿದಂತೆ ಹಲವು ವಿಷಯಗಳ ತಪಾಸಣೆ ಮಾಡಲು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿ ಮಟ್ಟದ ಅಧಿಕಾರಿಗಳಿಗೆ ಒಂದೊಂದು ಜಿಲ್ಲೆಗಳನ್ನು ಹಂಚಿಕೆ ಮಾಡಲಾಗುತ್ತಿದೆ.

ನೂತನ ಸರ್ಕಾರ ರಚಿತವಾದ ನಂತರ ಅನೇಕ ಪ್ರಧಾನ ಕಾರ್ಯದರ್ಶಿಗಳ/ಕಾರ್ಯದರ್ಶಿಗಳ ಮತ್ತು ಕಾರ್ಯದರ್ಶಿ ಮಟ್ಟದ ಅಧಿಕಾರಿಗಳ ಇಲಾಖೆಗಳು/ಕಛೇರಿಗಳು ಬದಲಾವಣೆಗೊಂಡಿರುವುದರಿಂದ, ಜಿಲ್ಲೆಗಳಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳನ್ನು ಮರುಹಂಚಿಕೆ ಮಾಡುವ ಅಗತ್ಯತೆ ಉದ್ಭವಿಸಿದ್ದು, ಅದರಂತೆ ಈಗ ಮರುಹಂಚಿಕೆ ಮಾಡಲಾದ ಜಿಲ್ಲೆ ಮತ್ತು ಉಸ್ತುವಾರಿ ಅಧಿಕಾರಿಗಳ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಪ್ರತಿ ತಿಂಗಳು ತಪ್ಪದೇ ಕನಿಷ್ಠ 2 ರಿಂದ 3 ದಿನಗಳವರೆಗೆ ತಮಗೆ ವಹಿಸಿರುವ ಜಿಲ್ಲೆಗಳ ಪ್ರವಾಸವನ್ನು ಕೈಗೊಂಡು, ಕೆಳಕಂಡ ಕಾರ್ಯಕ್ರಮಗಳ ಸಮೀಕ್ಷೆ ನಡೆಸಬೇಕೆಂದು ಕೋರಲಾಗಿದೆ.

1) ಋತುಮಾನ ಪರಿಸ್ಥಿತಿ ಮತ್ತು ಕೃಷಿ ಚಟುವಟಿಕೆಗಳು
2) ಕುಡಿಯುವ ನೀರಿನ ಸಮಸ್ಯೆ
3) ಅಭಿವೃದ್ಧಿ ಕಾಮಗಾರಿಗಳು ಹಾಗೂ ವಿವಿಧ ಯೋಜನೆಗಳ ಅನುಷ್ಠಾನ
4) ಪಡಿತರ ಆಹಾರ ಧಾನ್ಯಗಳ ವಿತರಣೆ ಹಾಗೂ ವಿತರಣಾ ಮಳಿಗೆಗಳಿಗೆ ಭೇಟಿ ನೀಡುವುದು.
5) ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಯೋಜನೆ ಅನುಷ್ಠಾನ.
6) ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟದ ಯೋಜನೆ.

7) ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ.
8) ಲೋಕಸಭಾ ಸದಸ್ಯರುಗಳ ಸ್ಥಳೀಯ ಪ್ರದೇಶಗಳ ಅಭಿವೃದ್ಧಿ ಯೋಜನೆ (ಎಂ.ಪಿ.ಎಲ್.ಎ.ಡಿ).
9) ಆಡಳಿತವನ್ನು ಚುರುಕುಗೊಳಿಸಲು ಅನಿರೀಕ್ಷಿತ ತಪಾಸಣೆ ನಡೆಸುವುದು ಸಾರ್ವಜನಿಕ ಕುಂದುಕೊರತೆಗಳ ಬಗ್ಗೆ ಒತ್ತು ನೀಡುವುದು.
10) ಜಿಲ್ಲೆಯಲ್ಲಿರುವ ಸಮಸ್ಯೆಗಳ ಬಗ್ಗೆ ಸಂಬಂಧಪಟ್ಟ ಇಲಾಖೆಗಳೊಡನೆ ವ್ಯವಹರಿಸಿ ಸಮಸ್ಯೆ ಬಗೆಹರಿಸಲು ಸತತವಾಗಿ ಪ್ರಯತ್ನ ಮಾಡುವುದು.
11) ಇದರೊಂದಿಗೆ ಆಯಾ ಜಿಲ್ಲೆಗಳಿಗೆ ಸೀಮಿತವಾದ ನಿರ್ದಿಷ್ಟವಾದ ಸಮಸ್ಯೆಗಳನ್ನು ಸಹ ಪರಿಶೀಲಿಸುವುದು.
12) ಜಿಲ್ಲೆಯಲ್ಲಿ ಜ್ವಲಂತ ಸಮಸ್ಯೆಗಳಿದ್ದಲ್ಲಿ ಅವುಗಳ ಬಗ್ಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳೊಂದಿಗೆ ಚರ್ಚಿಸುವುದು.

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ತಮಗೆ ನಿಗದಿಪಡಿಸಿದ ಜಿಲ್ಲೆಗಳ ಪ್ರವಾಸವನ್ನು ಕೈಗೊಂಡ ನಂತರ ಸಮಗ್ರವಾದ ವರದಿಯನ್ನು ತಯಾರಿಸಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು / ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಹಾಗೂ ಸಂಬಂಧಪಟ್ಟ ಇಲಾಖಾ ಕಾರ್ಯದರ್ಶಿಗಳಿಗೆ (ಸಂಬಂಧಪಟ್ಟ ಸಮಸ್ಯೆಗಳಿಗನುಗುಣವಾಗಿ) 15 ದಿನಗಳೊಳಗಾಗಿ ಕಳುಹಿಸಿಕೊಡುವಂತೆ ಹಾಗೂ ಅದರ ಪ್ರತಿಯನ್ನು ಸರ್ಕಾರದ ಕಾರ್ಯದರ್ಶಿ, ಸಿಆಸುಇ(ಆಡಳಿತ ಸುಧಾರಣೆ)ಗೆ ಕಳುಹಿಸಿಕೊಡುವಂತೆ ಕೋರಲಾಗಿದೆ.

ಕರ್ನಾಟಕ ಸರ್ಕಾರ

ಸಂಖ್ಯೆ:ಸಿಆಸುಇ 98 ಇಸಪ 2009 ಕರ್ನಾಟಕ ಸರ್ಕಾರದ ಸಚಿವಾಲಯ,
2ನೇ ಮಹಡಿ, 5ನೇ ಹಂತ, ಬಹುಮಹಡಿಗಳ
ಕಟ್ಟಡ,
ಬೆಂಗಳೂರು, ದಿನಾಂಕ: 4/7/2009

ಸುತ್ತೋಲೆ

ವಿಷಯ: ಜಿಲ್ಲಾ ಮಟ್ಟದ ಹಾಗೂ ಉಪ ವಿಭಾಗ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ತಾಲ್ಲೂಕು ಕೇಂದ್ರಗಳಿಗೆ ಸಂದರ್ಶನ ನೀಡುವ ಪೂರ್ವದಲ್ಲಿ ಸಂಬಂಧಪಟ್ಟ ಕ್ಷೇತ್ರದ ಸಂಸತ್ ಸದಸ್ಯರು ಮತ್ತು ವಿಧಾನ ಮಂಡಲದ ಸದಸ್ಯರ ಗಮನಕ್ಕೆ ತರುವ ಬಗ್ಗೆ.

ಉಲ್ಲೇಖ: ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಟಿಪ್ಪಣಿ ಸಂಖ್ಯೆ: ಪಿಎಸ್‌ಸಿಎಂ/1677/2009 ದಿನಾಂಕ: 23/5/2009.